ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 20 ನೇ ಮಾರ್ಚ್, 2020

ರಾಜ್ಯದಲ್ಲಿರುವ ಗ್ರಾಮ ಪಂಚಾಯಿತಿಗಳ ವಿವರ

ಶ್ರೀ ಆರ್. ಪ್ರಸನ್ನ ಕುಮಾರ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

1366 (1569) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಗ್ರಾಮಪಂಚಾಯಿತಿಗಳ ಸಂಖ್ಯೆ ಎಷ್ಟು ;

(ಆ) ಶಿವಮೊಗ್ಗ ಜಿಲ್ಲೆ ಹಾಗೂ ದಾವಣಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕಿನ ಎಲ್ಲಾ ಗ್ರಾಮಪಂಚಾಯಿತಿಗಳಲ್ಲಿ ಪಿಡಿಓಗಳು ಇದ್ದಾರೆಯೇ ;

(ಇ) ಪಿಡಿಓಗಳು ಇಲ್ಲದಿದ್ದಲ್ಲಿ, ಎಷ್ಟು ಪಿಡಿಓಗಳ ಕೊರತೆಯಾಗಿದೆ; ಈ ಕೊರತೆಯನ್ನು ತುಂಬಲು ಸರ್ಕಾರ ಯಾವ ಕ್ರಮ ಕೈಗೊಂಡಿರುತ್ತದೆ;

(ಈ) ಸದರಿ ಗ್ರಾಮಪಂಚಾಯಿತಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ಸಿಬ್ಬಂದಿಗಳೆಷ್ಟು; (ಬಿಲ್ ಕಲೆಕ್ಟರ್, ನೀರು ವಿತರಕ, ವಾಲ್ ಮ್ಯಾನ್, ಜವಾನ, ಡಾಟಾ ಎಂಟ್ರಿ ಆಪರೇಟರ್, ಸ್ವಚ್ಛತಾಗಾರ ಇತರೆ ಸಿಬ್ಬಂದಿಗಳ ವಿವರವಾದ ಮಾಹಿತಿ ನೀಡುವುದು)

(ಉ) ಜಿಲ್ಲಾ ಪಂಚಾಯಿತಿಯಿಂದ ಅನುಮೋದನೆಯಾಗಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಹಾಗೂ ಅನುಮೋದನೆಗೊಳ್ಳದೆ ಬಾಕಿ ಇರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು;

(ಊ) ಬಾಕಿ ಇರುವ ಸಿಬ್ಬಂದಿಗಳನ್ನು ಯಾವ ಕಾಲಮಿತಿಯೊಳಗೆ ಅನುಮೋದನೆ ನೀಡಿ ಆದೇಶ ಹೊರಡಿಸಲಾಗುವುದು ? (ಮಾಹಿತಿ ನೀಡುವುದು)